**JANUARY 8,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಎಚ್ ಎಂ.ಪಿ.ವಿ ವೈರಾಣು ಬಗ್ಗೆ** ಸಾರ್ವಜನಿಕರು ಭಯಪಡಬೇಕಾದ ಅಗತ್ಯವಿಲ್ಲ. ಜಾಗರೂಕರಾಗಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬೆಂಗಳೂರು, ಗಾಂಧಿ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈಗಾಗಲೇ ಆರೋಗ್ಯ ಇಲಾಖೆಯವರು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದಾರೆ, ಎಚ್ ಎಂ.ಪಿ.ವಿ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ. ಈ ಬಗ್ಗೆ ತಜ್ಞರ ಅಭಿಪ್ರಾಯಗಳನ್ನು ಪಡೆಯಲಾಗಿದೆ ಎಂದರು.

<><><>

**ಇಂದು ಆಕಾಶವಾಣಿ ಧಾರವಾಡ** ಕೇಂದ್ರಕ್ಕೆ 75 ನೇ ವ ರ್ಷದ ಸಂಭ್ರಮ. ಅಮೃತ ಮಹೋತ್ಸವ ವ ರ್ಷಾಚರಣೆಯ ಸಂದರ್ಭ ಕೇಂದ್ರದ ಜೊತೆಗಿನ ತಮ್ಮ ನಂಟಿನ ಬಗ್ಗೆ ಮಾಹಿತಿ ನೀಡಿ, ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ, ಹಿರಿಯ ಸಾಹಿತಿ ಹಾಗೂ ವಿಮರ್ಶಕ ಡಾಕ್ಟರ ಶ್ಯಾಮಸುಂದರ ಬಿದರಕುಂದಿ ಅವರು...

<><><>

**ಬೈಟ್: ಶ್ಯಾಮಸುಂದರ ಬಿದರಕುಂದಿ 34 ಸೆಕೆಂದುಗಳು**

<><><>

**ಡಾಕ್ಟರ್ ನಾ. ಡಿಸೋಜಾ ಅವರು ಪರಿಸರ** ಕಾಳಜಿ ಇದ್ದಂತಹ ಅಪೂರ್ವ ಕಥೆಗಾರ, ಮಕ್ಕಳ ಸಾಹಿತ್ಯಕ್ಕೆ ಹೆಚ್ಚಿನ ಒತ್ತು ನೀಡಿ, ಕಥೆ, ಕಾದಂಬರಿಗಳ ಮೂಲಕ ಪರಿಸರ ಸಂರಕ್ಷಣೆ ಬಗ್ಗೆ ಎಚ್ಚರಿಸಿದವರು ಡಾಕ್ಟರ್ ನಾ. ಡಿಸೋಜಾರವರು ಎಂದು ಧಾರವಾಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕೋಶಾಧ್ಯಕ್ಷ ಡಾಕ್ಟರ್ ಎಸ್.ಎಸ್ ದೊಡಮನಿ ಅವರು ಹೇಳಿದರು. ಧಾರವಾಡ ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಜಂಟಿಯಾಗಿ ಆಯೋಜಿಸಿದ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು, ನಾ. ಡಿಸೋಜ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದರು.

<><><>

**ಧಾರವಾಡದ ಪ್ರತಿಷ್ಠಿತ ಶ್ರೀ ಹುರಕಡ್ಲಿ** ಅಜ್ಜ ಶಿಕ್ಷಣ ಸಮಿತಿಯ, ಡಾ.ಶುಶೀಲಾ ಮುರಿಗೆಪ್ಪ ಶೇಷಗಿರಿ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿನಿ ಅಮೃತಾ ಬಳ್ಳಾರಿ ಅವರು, ವಿಜಯಪುರದ ಕರ್ನಾಟಕ ರಾಜ್ಯ, ಅಕ್ಕ ಮಹಾದೇವಿ ಮಹಿಳಾ

ವಿಶ್ವವಿದ್ಯಾಲಯ ನಡೆಸಿದ, ಬಿ.ಕಾಂ ಪದವಿ ಪರೀಕ್ಷೆಯಲ್ಲಿ, 2 ನೇ ರ್‍ಯಾಂಕ್ ಗಳಿಸಿದ್ದಾರೆ. ಇವರನ್ನು ಆಡಳಿತ ಮಂಡಳಿ ಪದಾಧಿಕಾರಿಗಳು, ಶಿಕ್ಷಕರು ಅಭಿನಂದಿಸಿದ್ದಾರೆ.

<><><>

**ರಾಷ್ಟ್ರಕವಿ ಕುವೆಂಪು ಅವರ 120 ನೇ** ಜನ್ಮದಿನೋತ್ಸವದ ಅಂಗವಾಗಿ, ವಿಶ್ವ ಮಾನವ ದಿನಾಚರಣೆ ಕಾರ್ಯಕ್ರಮವು ಇಂದು ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯ ಶಾಂತವೇರಿ ಗೋಪಾಲಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಕುಪ್ಪಳ್ಳಿಯ ರಾಷ್ಟ್ರಕವಿ ಕುವೆಂಪು ಪ್ರತಿಷ್ಠಾನದ ವತಿಯಿಂದ ಸಂಜೆ 6 ಗಂಟೆಗೆ ಕುವೆಂಪು ಅವರ ಎರಡು ನಾಟಕಗಳು ಹಾಗೂ ನೃತ್ಯ ರೂಪಕ ಪ್ರದರ್ಶನಗೊಳ್ಳಲಿದೆ.

<><><>

**ಬೀದರ ಜಿಲ್ಲೆಯನ್ನು ಗುಡಿಸಲು ಮುಕ್ತ** ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಸಹಭಾಗಿತ್ವದಲ್ಲಿ, 15 ಸಾವಿರ ಮನೆಗಳು ಮಂಜೂರಾಗಿವೆ ಎಂದು, ಬೀದರ ಸಂಸದ ಸಾಗರ ಈಶ್ವರ ಖಂಡ್ರೆ ಅವರು ತಿಳಿಸಿದರು. ಸಂಸದರ ಕಚೇರಿ ಆವರಣದಲ್ಲಿ, ಭಾಲ್ಕಿ ತಾಲ್ಲೂಕಿನ ಗ್ರಾಮೀಣ ಭಾಗದ 665 ಜನರಿಗೆ, 2024–25ನೇ ಸಾಲಿನ ಪಿ.ಎಂ.ಎ.ವಾಯ್ ಯೋಜನೆ ಅಡಿಯಲ್ಲಿ ಮಂಜೂರಾದ ಮನೆಗಳ ತಿಳಿವಳಿಕೆ ಪತ್ರ ವಿತರಣೆ ಮಾಡಿ ಅವರು ಮಾತನಾಡಿದರು.

<><><>

**ರಾಜ್ಯ ಸರ್ಕಾರ ಐದು ಖಾತರಿ** ಯೋಜನೆಗಳಲ್ಲಿ ಒಂದಾಗಿರುವ ಯುವನಿಧಿ ಯೋಜನೆಯ ನೋಂದಣಿ ಅಭಿಯಾನವು ಬೀದರ ಜಿಲ್ಲೆಯಲ್ಲಿ 6 ನೇ ತಾರೀಖಿನಂದು ಆರಂಭಗೊಂಡಿದ್ದು, 20 ನೇ ತಾರೀಖಿನ ವರೆಗೆ ಜಾರಿಯಲ್ಲಿರಲಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

<><><>

**ಜಲಜೀವನ ಮಿ ’ನ್ ಯೋಜನೆ ಅಡಿಯಲ್ಲಿ ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳ** ಹಳ್ಳಿಗಳಿಗೆ, ಕುಡಿಯುವ ನೀರು ಒದಗಿಸುವ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ, ಅನುಮೋದನೆ ನೀಡುವಂತೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ ಅವರಿಗೆ ರಾಜ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ ಕೋರಿದ್ದಾರೆ. ನವದೆಹಲಿಯ ಜಲಶಕ್ತಿ ಸಚಿವಾಲಯದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು ಯೋಜನೆ ಸಾಕಾರಗೊಂಡಲ್ಲಿ ಎರಡು ಜಿಲ್ಲೆಗಳ ಸುಮಾರು 31 ಲಕ್ಷದ 67 ಸಾವಿರ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಒದಗಿಸಬಹುದಾಗಿದೆ ಎಂದರು.

<><><>

**ಚಾಮರಾಜನಗರ,** ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿ ವತಿಯಿಂದ ಆಯೋಜಿತವಾದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ 2024–25 ಕಾರ್ಯಕ್ರಮವನ್ನು, ಶಾಸಕ ಸಿ ಪುಟ್ಟರಂಗಶೆಟ್ಟಿ ಉದ್ಘಾಟಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>